ಕರ್ನಾಟಕ ಸರ್ಕಾರ

ನಿರ್ದೇಶಕರಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು
E-mail:commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ:ಪಪೂಶಿ/ಶೈಶಾ-02/ಕಾ.ಸಂ.ಬ.ದಾ /2020-21

ದಿನಾಂಕ:- 11 01.2021

## ಸುತ್ತೋಲೆ

**ವಿಷಯ:**-ಪ್ರಥಮ/ ದ್ವಿತೀಯ ಪಿಯುಸಿಯ ದಾಖಲಾತಿ ಮತ್ತು ಕಾಲೇಜು ಬದಲಾವಣೆ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

**ಉಲ್ಲೇಖ:**-1. ನಿರ್ದೇಶಕರು(ಪರೀಕ್ಷೆ) ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಇವರ ಪತ್ರ ಸಂಖ್ಯೆ ಎ8/ಎಸ್.ಎಸ್.ಎಲ್.ಸಿ/ಪ.ದಾ/12/2020-21 ದಿನಾಂಕ: 20.10.2020

2. ಈ ಕಛೇರಿಯ ಸಮ ಪತ್ರ ಸಂಖ್ಯೆ ದಿನಾಂಕ: 23.10.2020
3. ಈ ಕಛೇರಿ ಸಮ ಪತ್ರ ಸಂಖ್ಯೆ ದಿನಾಂಕ:25.11.2020
4. ಈ ಕಛೇರಿ ಸಮ ಪತ್ರ ಸಂಖ್ಯೆ ದಿನಾಂಕ:05.12.2020
5. ಈ ಕಛೇರಿ ಸಮ ಪತ್ರ ಸಂಖ್ಯೆ ದಿನಾಂಕ 22.12.2020
6. ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿ

* * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2020-21 ನೇ ಶೈಕ್ಷಣಿಕ ಸಾಲಿಗೆ ದಾಖಲಾತಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ದಿನಾಂಕವನ್ನು ಪ್ರಥಮ ಪಿಯುಸಿಗೆ ಮತ್ತು ದ್ವಿತೀಯ ಪಿಯುಸಿಗೆ ದಿನಾಂಕ 08.01.2021 ರವರೆಗೆ ವಿಸ್ತರಿಸಲಾಗಿತ್ತು. ಉಲ್ಲೇಖ 06 ರಲ್ಲಿ ವಿದ್ಯಾರ್ಥಿಗಳು ಮತ್ತು ಪೋಷಕರ ಮನವಿಯ ಮೇರೆಗೆ ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿಯುಸಿಯ ದಾಖಲಾತಿ ಹಾಗೂ ಕಾಲೇಜು ಬದಲಾವಣೆಯನ್ನು ದಿನಾಂಕ: 22.01.2021 ರವರೆಗೆ ವಿಸ್ತರಿಸಲಾಗಿದೆ. ದಾಖಲಾತಿ ಶುಲ್ಕವನ್ನು ಖಜಾನೆಗೆ ಮಾರನೇ ಕಾರ್ಯನಿರತ ದಿನದಂದು ಕಡ್ಡಾಯವಾಗಿ ಪಾವತಿಸುವುದು.

ಎಲ್ಲಾ ಪ್ರಾಂಶುಪಾಲರು ಕಾಲೇಜಿನ ಸೂಚನಾ ಫಲಕದಲ್ಲಿ ಸದರಿ ಮಾಹಿತಿಯನ್ನು ಕಡ್ಡಾಯವಾಗಿ ಪ್ರಕಟಿಸುವುದು ಹಾಗೂ ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ಸೂಕ್ತ ವಿಧಾನದಿಂದ ತಿಳಿಸಲು ಸೂಚಿಸಲಾಗಿದೆ.

**ವಿ.ಸೂ:- 2020-21ನೇ ಸಾಲಿಗೆ ಸಂಬಂಧಿಸಿದಂತೆ, ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿಯುಸಿ ದಾಖಲಾತಿ ಹಾಗೂ ಕಾಲೇಜು ಬದಲಾವಣೆ ಪ್ರಕ್ರಿಯೆಯ ಅವಧಿಯನ್ನು ಮತ್ತೆ ಯಾವುದೇ ಕಾರಣಕ್ಕೂ ವಿಸ್ತರಣೆ ಮಾಡಲಾಗುವುದಿಲ್ಲ. ಈ ಮಾಹಿತಿಯನ್ನು ವಿದ್ಯಾರ್ಥಿಗಳಿಗೆ ಹಾಗೂ ಪೋಷಕರಿಗೆ ಮನದಟ್ಟು ಮಾಡಲು ಪ್ರಾಂಶುಪಾಲರಿಗೆ ಸೂಚಿಸಿದೆ**

**ಮಾನ್ಯ ನಿರ್ದೇಶಕರ ಅದೇಶದ ಮೇರೆಗೆ**

R Kusuma

ಜಂಟಿ ನಿರ್ದೇಶಕರು (ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ
11/1/2021

**ಪ್ರತಿಗಳು:-**

1. ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ- ಮುಂದಿನ ಕ್ರಮಕ್ಕಾಗಿ
2. ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು, ಉಪನ್ಯಾಸಕರು, ವಿದ್ಯಾರ್ಥಿಗಳು, ಪೋಷಕರು ಹಾಗೂ ಸಾರ್ವಜನಿಕರ ಗಮನಕ್ಕೆ ತರಲು, ಜಿಲ್ಲಾ ಉಪನಿರ್ದೇಶಕರ ಮೂಲಕ - ಮುಂದಿನ ಕ್ರಮಕ್ಕಾಗಿ
3. ಜಂಟಿ ನಿರ್ದೇಶಕರು (ಪರೀಕ್ಷೆ/ಆಡಳಿತ/ಶೈಕ್ಷಣಿಕ/ಮಾನ್ಯತೆ/RIDF),ಪದವಿ ಪೂರ್ವ ಶಿಕ್ಷಣ ಇಲಾಖೆ -ಮಾಹಿತಿಗಾಗಿ
4. ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ-ಮಾಹಿತಿಗಾಗಿ
5. ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ- ವೆಬ್‌ಸೈಟ್‌ನಲ್ಲಿ ಅಳವಡಿಸಲು
6. ಕಛೇರಿ ಪ್ರತಿ.